ಪ್ರಾರಂಭಿಸಲು ಮಂಜೂರಾತಿಯನ್ನು ನೀಡಲಾಗುವುದೇ ಹಾಗೂ ಯಾವ ಯಾವ ಸ್ಥಳಗಳಲ್ಲಿ ಹೊಸ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲಾಗುವುದು?

ಡಿ ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) 1 ಸರ್ಕಾರಿ ಪಾಲಿಟೆಕ್ನಿಕ್, ಬೀದರ್ (ಸರ್ಕಾರಿ)

2 ಜೆ ಎಸ್ ಪಾಟಿಟೆಕ್ನಿಕ್, ತಾಣಾಕುಶನೂರು (ಅನುದಾನಿತ)

3 ನಿಟ್ಟೂರು ಎಜುಕೇಷನ್ ಸೊಸೈಟಿ ಪಾಲಿಟೆಕ್ನಿಕ್ ನಿಟ್ಟೂರು (ಖಾಸಗಿ)

4 ಹರಳಯ್ಯ ಪಾಲಿಟೆಕ್ನಿಕ್, ಬಾಲ್ಕಿ (ಖಾಸಗಿ)

ಆ) ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ತಾಂತ್ರಿಕ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಹೆಚ್ಚಳ ಇಲ್ಲದಿರುವುದು ಕಂಡು ಬಂದಿದೆ ಆದಾಗ್ಯೂ ಸರ್ಕಾರಿ ಮತ್ತು ಅನುದಾನಿತ ಪಾಲಿ ಟೆಕ್ನಿಕ್‌ಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿರುವುದು ಕಂಡು ಬಂದಿದೆ

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

483(753) ಶ್ರೀ ನರಸಿಂಹನಾಯಕ್ (ರಾಜೂಗೌಡ) (ಸುರಪುರ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಸುರಪುರ ತಾಲ್ಲೂಕಿನ ಕೋಡಕಲ್ ಹೋಬಳಿಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ಬಡ ಜನ ವಿದ್ಯಾವಂತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಅಲ್ಲಿ ಪದವಿ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ

ಆ) ಹಾಗಿದ್ದಲ್ಲಿ, ಸರ್ಕಾರ ಪದವಿ ಕಾಲೇಜು ಪ್ರಾರಂಭಿಸುವ ಬಗ್ಗೆ ಯಾವ ಕ್ರಮ ಕೈಗೊಂಡಿದೆ?

ಶ್ರೀ ಡಿ ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಪ್ರಸ್ತುತ ಪ್ರಥಮ ದರ್ಜೆ ಕಾಲೇಜು ಸ್ಥಾಪನೆಯ, ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ

484(756) ಶ್ರೀ ನರಸಿಂಹ ನಾಯಕ್ (ರಾಜೂಗೌಡ) (ಸುರಪುರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಸುರುಪುರ ಹಾಗೂ ಷಹಪುರ ತಾಲ್ಲೂಕುಗಳಲ್ಲಿ ಪ್ರತಿನಿತ್ಯ 84000 ಲೀಟರ್ ಹಾಲು ಉತ್ಪಾದಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೆ

ಆ) ಹಾಗಿದ್ದಲ್ಲಿ, ಕಾರ್ಯನಿರ್ವಹಿಸುತ್ತಿರುವ ಕೆಲವು ಕೇಂದ್ರಗಳನ್ನು ಮುಚ್ಚಿಸಲು ಕಾರಣವೇನು,

ಇ) ಷಹಪುರ ಮತ್ತು ಸುರಪುರ ಹಾಲು ಉತ್ಪಾದನಾ ಕೇಂದ್ರಗಳ್ಲಲಿ ಸರ್ಕಾರದ ಬೆಲೆ ಪ್ರತಿ ಲೀಟರಿಗೆ ರೂ 9 20 ಇದ್ದು ರೈತರು 4 00 ರೂ ಗಳಿಗೆ ವಾರಾಟ ವಾಡಿ ಸಾಕಷ್ಟು ಸಂಕಷ್ಟದಲ್ಲಿರುವುದರಿಂದ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಸುರಪುರ ಹಾಗೂ ಷಹಪುರ ತಾಲ್ಲೂಕುಗಳಲ್ಲಿ 56,000 ಲೀಟರ್ ಹಾಲು ಪ್ರತಿದಿನ ಉತ್ಪಾದನೆ ಇರುತ್ತದೆ